ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಹುದ್ದೆಗಳಿಗೆ ನೇಮಕ ಮಾಡುವ ಬಗ್ಗೆ

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ) -

660 (827) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಸಹಕಾರ ಇಲಾಖೆಯಲ್ಲಿ ವಿವಿಧ ವೃಂದಗಳ ಮಂಜೂರಾಗಿರುವ, ಭರ್ತಿಯಾಗಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಸಹಕಾರ ಅಭಿವೃದ್ಧಿ ಅಧಿಕಾರಿಗೆ, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಹುದ್ದೆಯ ಪ್ರಭಾರವನ್ನು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಆದೇಶದ ಪ್ರತಿಯೊಂದಿಗೆ ವಿವರ ನೀಡುವುದು;

(ಇ) ಈ ರೀತಿಯಾಗಿ ಅವರಿಗೆ ಹೆಚ್ಚುವರಿ ಪ್ರಭಾರ ನೀಡಲು ಹಾಗೂ ಹುದ್ದೆಯ ಅಧಿಕಾರ ಚಲಾಯಿಸಲು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ-1959ರಲ್ಲಿ ಅವಕಾಶ ಕಲ್ಪಿಸಲಾಗಿದೆಯೇ; ಹಾಗಾದಲ್ಲಿ, ಯಾವ ಕ್ರಮವನ್ನು ಸರ್ಕಾರದಿಂದ ತೆಗೆದುಕೊಳ್ಳಲಾಗುವುದು;

(ಈ) ಸಹಕಾರ ಸಂಘಗಳ ಸಹಾಯಕ ನಿಬಂಧಕರ ಹುದ್ದೆಯ ಹೆಚ್ಚಿನ ಪ್ರಭಾರ ನಿರ್ವಹಿಸುತ್ತಿರುವ ಎಷ್ಟು ಸಹಕಾರ ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ಸರ್ಕಾರಕ್ಕೆ ದೂರುಗಳು ಸ್ವೀಕೃತವಾಗಿದೆ; ಹಾಗೂ ಅವರುಗಳ ಮೇಲೆ ಯಾವ ಕ್ರಮ ತೆಗೆದುಕೊಳ್ಳಲಾಗಿದೆ? (ವಿವರ ಒದಗಿಸುವುದು)